## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 30 ತಾತ್ಕಾಲಿಕ ಯೋಜನಾ ನಿರ್ದೇಶಕರು(ಡಿ.ಆರ್.ಡಿ.ಕೋಶ) ಹುದ್ದೆಗಳನ್ನು ಶಾಶ್ವತವೆಂದು ಪರಿಗಣಿಸಿರುವ ಕ್ರಮವನ್ನು ಸ್ಥಿರೀಕರಿಸುವ ಬಗ್ಗೆ ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 285 ವಿಸೇಬಿ 1999, ದಿನಾಂಕ: 18.03.2000
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 179 ಕೆಎಸ್ಎಸ್ 2007(1), ದಿನಾಂಕ: 29.08.2008
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 179 ಕೆಎಸ್ಎಸ್ 2007(2), ದಿನಾಂಕ: 29.08.2008
4. ಸಕಾರದ ಆದೇಸ ಸಂಖ್ಯೆ: ಗ್ರಾಅಪ 281 ಪಬವ 2011, ದಿನಾಂಕ: 14.02.2012.
5. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 281 ಪಬವ 2011, ದಿನಾಂಕ: 08.05.2012
6. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 281 ಪಬವ 2011, ದಿನಾಂಕ: 24.05.2012.

****

**ಪ್ರಸ್ತಾವನೆ:**

ಭಾರತ ಸರ್ಕಾರವು ಸಂವಿಧಾನಕ್ಕೆ 73 ಮತ್ತು 74ನೇ ತಿದ್ದುಪಡಿಯನ್ವಯ, ದಿನಾಂಕ: 10.05.1993 ರಿಂದ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರನ್ನು ಜಾರಿಗೆ ತಂದ ನಂತರ, ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಮಟ್ಟಗಳಲ್ಲಿ, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಮತ್ತು ಗ್ರಾಮ ಪಂಚಾಯತಿಗಳು ಅಸ್ಥಿತ್ವಕ್ಕೆ ಬಂದ ಹಿನ್ನೆಲೆಯಲ್ಲಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯಚಟುವಟಿಕೆಗಳು ಹಾಗೂ ಅಧಿಕಾರಿಗಳ ಕರ್ತವ್ಯ ಮತ್ತು ಜವಾಬ್ದಾರಿಗಳು ಹೆಚ್ಚಾದ ಕಾರಣ, ಮೇಲೆ ಓದಲಾದ(1), (2), (3) ಮತ್ತು (4)ರ ಸರ್ಕಾರಿ ಆದೇಶಗಳಲ್ಲಿ ಪ್ರತಿಯೊಂದು ಜಿಲ್ಲಾ ಪಂಚಾಯತಿಗೆ ತಲಾ ಒಂದರಂತೆ ಒಟ್ಟು-30 ಜಿಲ್ಲಾ ಗ್ರಾಮೀಣ ಆಡಳಿತ ಕೋಶ ಮತ್ತು 30 ಯೋಜನಾ ನಿರ್ದೇಶಕರುಗಳ ಹುದ್ದೆಗಳನ್ನು ಸೃಜಿಸಲಾಗಿತ್ತು. ಈ ಹುದ್ದೆಗಳು ತಾತ್ಕಾಲಿಕ ಸ್ವರೂಪದ್ದಾಗಿದ್ದು, ಸದರಿ 30 ಹುದ್ದೆಗಳನ್ನು ಕರ್ನಾಟಕ ಸಾಮಾನ್ಯ ಸೇವೆ(ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ)ಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ತಾತ್ಕಾಲಿಕ ಹುದ್ದೆಗಳೆಂದು ಪರಿಗಣಿತವಾಗಿರುತ್ತವೆ.

ಭಾರತ ಸರ್ಕಾರ ಮತ್ತು ರಾಜ್ಯ ಸರ್ಕಾರದ ಮಹತ್ವದ ಕಾರ್ಯಕ್ರಮ/ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಮಾನವ ಸಂಪನ್ಮೂಲ ಒದಗಿಸುವ ಅಗತ್ಯವಿದ್ದ ಕಾರಣ,

ಸದರಿ 30 ತಾತ್ಕಾಲಿಕ ಯೋಜನಾ ನಿರ್ದೇಶಕರುಗಳ ಹುದ್ದೆಗಳನ್ನು ಶಾಶ್ವತ ಹುದ್ದೆಗಳೆಂದು ಮುಂದುವರೆಸುವುದು ಅಗತ್ಯವೆಂದು ಸರ್ಕಾರವು ಮನಗಂಡು ಮೇಲೆ(5) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ, ಸದರಿ 30 ಯೋಜನಾ ನಿರ್ದೇಶಕರುಗಳ ಹುದ್ದೆಗಳನ್ನು ತಾತ್ಕಾಲಿಕ ವೃಂದ ಬಲದಿಂದ ಶಾಶ್ವತ ವೃಂದಬಲದ ಹುದ್ದೆಗಳೆಂದು ಪರಿಗಣಿಸಲಾಗಿದೆ. ಅದರಂತೆ, ಮೇಲೆ (6) ರಲ್ಲಿ ಓದಲಾದ ಅಧಿಸೂಚನೆಯನ್ವಯ, ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ)ಯ ವೃಂದ ಮತ್ತು ನೇಮಕಾತಿ ನಿಯಮಗಳ ಕ್ರಮ ಸಂಖ್ಯೆ: 4ರ ಅಂಕಣ 3 ಕ್ಕೆ ಈ ಹುದ್ದೆಗಳನ್ನು ಸೇರ್ಪಡೆ ಮಾಡಿ ವೃಂದ ಬಲದ ಒಟ್ಟು ಹುದ್ದೆಗಳ ಸಂಖ್ಯೆಯನ್ನು 56ಕ್ಕೆ ಹೆಚ್ಚಿಸಿ ತಿದ್ದುಪಡಿಯನ್ನು ತರಲಾಗಿರುತ್ತದೆ.

ಆದರೆ ಈ ತಿದ್ದುಪಡಿ ಮಾಡುವ ಸಂದರ್ಭದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 97 ಎಸ್‌ಆರ್‌ಡಿ 2004 ದಿನಾಂಕ: 08.10.2004 ಹಾಗೂ ಅಧಿಸೂಚನೆ ಸಂಖ್ಯೆ: ಆರ್‌ಡಿಪಿ 281 ಪಿಬಿಪಿ 2011 ದಿನಾಂಕ: 24.05.2012 ರಲ್ಲಿ ನಿಗಧಿಪಡಿಸಿರುವ ವಿಧಿವಿಧಾನಗಳನ್ನು ಅನುಸರಿಸದೆ ಹಾಗೂ ಈ ಪ್ರಸ್ತಾವನೆಗೆ ಸಚಿವ ಸಂಪುಟದ ಅನುಮೋದನೆಯನ್ನು ಪಡೆಯದಿರುವುದನ್ನು ಸರ್ಕಾರವು ಗಮನಿಸಿದೆ.

ಮೇಲೆ ಓದಲಾದ (6) ರ ಅಧಿಸೂಚನೆಯನ್ವಯ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ)ಯ ವೃಂದ ಮತ್ತು ನೇಮಕಾತಿ ನಿಯಮಗಳು 2008ಕ್ಕೆ ಮಾಡಲಾದ ತಿದ್ದುಪಡಿಯನ್ನು ಸ್ಥಿರೀಕರಿಸುವ ಸಲುವಾಗಿ ಈ ದಿಸೆಯಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ತೀರ್ಮಾನಿಸಿ, ದಿನಾಂಕ: 22.02.2017ರ ಸಚಿವ ಸಂಪುಟದ ಅನುಮೋದನೆ ಪಡೆಯಲಾಗಿದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 206 ಪಬವ 2012 ಬೆಂಗಳೂರು ದಿನಾಂಕ: 04-03-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 285 ಪಿಸೇಜಿ 1999, ದಿನಾಂಕ: 18.03.2000, ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 179 ಕೆಎಸ್‌ಎಸ್ 2007(1), ದಿನಾಂಕ: 29.08.2008 ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 179 ಕೆಎಸ್‌ಎಸ್ 2007(2), ದಿನಾಂಕ: 29.08.2008 ಮತ್ತು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 281 ಪಬವ 2011, ದಿನಾಂಕ: 14.02.2012 ರಲ್ಲಿ ಮಂಜೂರಾಗಿರುವ ಒಟ್ಟು-30 ಯೋಜನಾ ನಿರ್ದೇಶಕರುಗಳ ಹುದ್ದೆಗಳನ್ನು ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ

ಆಡಳಿತ ಶಾಖೆ)ಯ ವೃಂದಬಲದ ಶಾಶ್ವತ ಹುದ್ದೆಗಳೆಂದು ಪರಿಗಣಿಸಿ ವೃಂದ ಮತ್ತು ನೇಮಕಾತಿ ನಿಯಮಗಳು 2008ಕ್ಕೆ ತಿದ್ದುಪಡಿ ಮಾಡಲಾದ ಅಧಿಸೂಚನೆ ಸಂಖ್ಯೆ: ಗ್ರಾಅಪ 281 ಪಬವ 2011, ದಿನಾಂಕ: 24.05.2012ರ ಕ್ರಮವನ್ನು ಸ್ಥಿರೀಕರಿಸಿದೆ.

ಈ ಆದೇಶವು ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ), ನಿಯಮಗಳು 1977ರ ನಿಯಮ 17ನೇ ನಿಯಮದ (2)ನೇ ಉಪನಿಯಮದ ಪರಂತುಕದ ವ್ಯಾಪ್ತಿಯೊಳಗೆ ಬರುತ್ತದೆ. ಅದರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

04/03/2017
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಜಿ&ಪಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಸಂಕಲನಕಾರರು, ರಾಜ್ಯಪತ್ರ ಇಲಾಖೆ ಬೆಂಗಳೂರು. (ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವಂತೆ ಕೋರಿದೆ.)
2) ಮಹಾಲೇಖಪಾಲರು(ಜಿ&ಎಸ್ಎಸ್ಎ)/(ಇ&ಆರ್ಎಸ್ಎ)/(ಎ&ಇ)ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನಸೌಧ, ಬೆಂಗಳೂರು.
4) ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
5) ಸರ್ಕಾರದ ಉಪಕಾರ್ಯದರ್ಶಿ(ಸೇವೆಗಳು) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6) ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, (ಸಚಿವ ಸಂಪುಟ), ವಿಧಾನಸೌಧ ಬೆಂಗಳೂರು.

ಪ್ರತಿ ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.